**ಕರ್ನಾಟಕ ಸರಕಾರ**

ಸಂ:ಬಿಜಿಎಂ:ಡಿಯುಡಿಸಿ:ಯುಪಿಎಸಿ:ಸಿಆರ್:1:2012-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ನಗರ ಬಡತನ ನಿರ್ಮೂಲನಾ ಕೋಶ,
ಬೆಳಗಾವಿ, ದಿನಾಂಕ:05.05.2012.

**ವಿಷಯ:**-ಪಟ್ಟಣ ಪಂಚಾಯತ ಕುಡಚಿ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25 ಮತ್ತು ಶೇ.3ರಡಿ ತೆಗೆದುಕೊಂಡ ಕಾರ್ಯಕ್ರಮ/ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ ಕುರಿತು.

**ಓದಿತು**:-1)ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ:415:ಜಿಇಎಲ್:2011 ದಿನಾಂಕ:27.02.2012
2)ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರ ಸುತ್ತೋಲೆ ಸಂ:ಪೌನಿ:22.75:ಸುತ್ತೋಲೆ:2:2012-13 ದಿನಾಂಕ:24.04.2012
3)ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಕುಡಚಿ ಇವರ ಪತ್ರ ಸಂಖ್ಯೆ: ಪಪಂಕು:ಶೇ.7.25, ಶೇ 3:2012-13 ದಿನಾಂಕ:28.04.2012.

**<u>ಪ್ರಸ್ತಾವನೆ:</u>**

2012-13ನೇ ಸಾಲಿಗೆ ಕುಡಚಿ ಪಟ್ಟಣ ಪಂಚಾಯತಿಯು ಸರ್ಕಾರದ ಸುತ್ತೋಲೆಯ ಮಾರ್ಗಸೂಚಿಗಳನ್ವಯ ಬಾಬ್ತುಗಳನ್ನು ಹೊರತುಪಡಿಸಿ ರೂ. 8,11,610/- ಗಳ ಆದಾಯವನ್ನು ಹೊಂದಿರುತ್ತದೆ. ಅದರಂತೆ ಓದಿತು (3)ರನ್ವಯ ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಕುಡಚಿ ಇವರು ಪಟ್ಟಣ ಪಂಚಾಯತ ಆದಾಯದಲ್ಲಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ರೂ.58,842/-ಗಳಲ್ಲಿ 04 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಒಟ್ಟು ರೂ. 24,348/-ಗಳಲ್ಲಿ 02 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಅದರಂತೆ ಓದಿತು (1)ರ ಸರ್ಕಾರದ ಸುತ್ತೋಲೆ ಮಾರ್ಗಸೂಚಿಯಂತೆ ಪರಿಶೀಲಿಸಲಾಗಿ, ಶೇ.7.25ರಷ್ಟು ನಗರದ ಇತರೆ ಬಡಜನರ ಕಲ್ಯಾಣ ನಿಧಿಗೆ ರೂ.58,842/-ಗಳಲ್ಲಿ 04 ಕಾರ್ಯಕ್ರಮಗಳಿಗೆ ಹಾಗೂ ಶೇ.3ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.24,348/-ಗಳಲ್ಲಿ 02 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗೆ ಪ್ರಸ್ತಾಪಿಸಿದ್ದನ್ನು ಪರಿಗಣಿಸಲಾಗಿದೆ.

| ಕ್ರ.ಸಂ | ಕಾರ್ಯಕ್ರಮಗಳ ಹೆಸರು | ಅಂದಾಜು ಮೊತ್ತ (ರೂ. ಗಳಲ್ಲಿ) |
|---|---|---|
| *1* | *2* | *3* |
| | **ಶೇ.7.25ರ ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ/ಕಾಮಗಾರಿಗಳು** | |
| | **ವ್ಯಕ್ತಿ ಸಂಬಧಿತ ಅನೂಕೂಲತೆಗಳು ಶೇ. 40%** | |
| 1 | ಸರ್ಕಾರದ ಸುತ್ತೋಲೆ ಸಂಖ್ಯೆ:ಅ.ನಂ:6.1 ರನ್ವಯ ಎಸ್‌ಎಸ್‌ಎಲ್‌ಸಿ ಓದುತ್ತಿರುವ ಬಡ ವಿದ್ಯಾರ್ಥಿಗಳಿಗೆ ವಿಶೇಷ ನೆರವು ನೀಡುವುದು | 20000.00 |
| 2 | ಸರ್ಕಾರದ ಸುತ್ತೋಲೆ ಸಂಖ್ಯೆ:ಅ.ನಂ:6.7 ರನ್ವಯ ಎಸ್.ಜೆ.ಎಸ್.ಆರ್.ವೈ ಯೋಜನೆಯಡಿಯಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿಗೆ ಹಾಜರಾಗುವ ಇತರೆ ಬಡ ವಿದ್ಯಾರ್ಥಿಗಳಿಗೆ ಪ್ರಯಾಣ ಭತ್ಯ ನೀಡುವುದು | 3537.00 |
| | **ಸಮುದಾಯ ಸೌಲಭ್ಯಗಳು ಶೇ. 60%** | |
| 3 | ಸರ್ಕಾರದ ಸುತ್ತೋಲೆ ಸಂಖ್ಯೆ:ಅ.ನಂ:7.1 (ಆ)ರಡಿಯಲ್ಲಿ ನಗರದ ಕೊಳಚೆ ಪ್ರದೇಶಗಳಲ್ಲಿ ಎರಡು ಆರೋಗ್ಯ ತಪಾಸಣಾ ಶಿಬಿರ ಹಾಗೂ ನೈರ್ಮಲ್ಯದ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. | 6000.00 |
| 4 | ಸರ್ಕಾರದ ಸುತ್ತೋಲೆ ಸಂಖ್ಯೆ:ಅ.ನಂ:7.3 ರಡಿಯಲ್ಲಿ ಶೇಖಲಾಡಿ ದರ್ಗಾದ ಹತ್ತಿರ ಶೇಖರವರ ಮನೆ ಹತ್ತಿರ ಪೈಪಲೈನ್ ಅಳವಡಿಸುವುದು | 29305.00 |
| | **ಒಟ್ಟು** | **58842.00** |
| | | |
| | **ಶೇ.3ರ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳು** | |
| | **ವ್ಯಕ್ತಿ ಸಂಬಧಿತ ಅನೂಕೂಲತೆಗಳು ಶೇ. 40%** | |
| 1 | ಸರ್ಕಾರದ ಸುತ್ತೋಲೆ ಸಂಖ್ಯೆ:ಅ.ನಂ:6.5.1 ರನ್ವಯ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸಕ್ಕಾಗಿ ವಿಶೇಷ ನೆರವು ನೀಡುವುದು, | 10000.00 |
| | **ಸಮುದಾಯ ಸೌಲಭ್ಯಗಳು ಶೇ. 60%** | |
| 2 | ಸರ್ಕಾರದ ಸುತ್ತೋಲೆ ಸಂಖ್ಯೆ:ಅ.ನಂ:7.4 (ಆ) ರಡಿಯಲ್ಲಿ ಪಟ್ಟಣ ಪಂಚಾಯತ ಕಾರ್ಯಾಲಯದಲ್ಲಿ ಜಾರು ಹಾದಿ ನಿರ್ಮಾಣ ಮಾಡುವುದು. | 14348.00 |
| | **ಒಟ್ಟು** | **24348.00** |

**<u>ಆದೇಶ</u>**

ಮೇಲಿನ ಪ್ರಸ್ತಾವನೆಯಂತೆ ಪಟ್ಟಣ ಪಂಚಾಯತ ಕುಡಚಿ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪುರಸಭೆ ಆದಾಯದಡಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಯೋಜನೆಯಡಿ ರೂ.58,842/-ಗಳಲ್ಲಿ 04 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಯೋಜನೆಯಡಿ ರೂ.24,348/-ಗಳಲ್ಲಿ 02 ಕಾರ್ಯಕ್ರಮಗಳನ್ನು ಕೈಕೊಳ್ಳಲು ಕ್ರಿಯಾಯೋಜನೆ ಅನುಮೋದನೆ ನೀಡಿ ಓದಿತು (1) ಹಾಗೂ (2)ರ ಸರ್ಕಾರದ ಸುತ್ತೋಲೆಯ ನಿಬಂಧನೆ ಹಾಗೂ ಷರತ್ತುಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಸಹಿ/-**
**(ವಿ. ಅನ್ಬುಕುಮಾರ)**
ಜಿಲ್ಲಾಧಿಕಾರಿಗಳು, ಬೆಳಗಾವಿ

**ಪ್ರತಿ:**ಗೌರವಾದರಗಳೊಂದಿಗೆ ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಾದರಪಡಿಸಿದೆ.
**ಪ್ರತಿ:**ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ
**ಪ್ರತಿ:**ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ಕುಡಚಿ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಸಹಿ/-**

ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ